4) ಅಮ್ಮಿನಭಾವಿಯಿಂದ ಹುಬ್ಬಳ್ಳಿಗೆ ನೇರವಾಗಿ ನೀರು ಸರಬರಾಜು ಮಾಡಲು ಕೊಳವೆ ಮಾರ್ಗ ಅಳವಡಿಕೆ ಯೋಜನೆಯನ್ನು ವಿಶ್ವ ಬ್ಯಾಂಕ್ ಸಹಾಯದೊಂದಿಗೆ (KUWASSIP) ವ ಯೋಜನಯಲ್ಲಿ ರೂ 3852 00 ಲಕ್ಷಗಳ ಯೋಜನೆ ಶೀಘ್ರ ಕೈಗೆತ್ತಿಕೊಳ್ಳಲಾಗುವುದು

5) ಹುಬ್ಬಳ್ಳಿ ಧಾರವಾಡ ನಗರಕ್ಕೆ ಮಲಪ್ರಭಾ ಜಲಾಶಯದಿಂದ ನೀರೊದಗಿಸುವ 3ನೇ ಹಂತದ ರೂ 144 00 ಕೋಟಿಗಳ ಯೋಜನೆ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಪರಿಶೀಲನೆಯಲ್ಲಿದೆ

4) ಹುಬ್ಬಳ್ಳಿ ಧಾರವಾಡ ಅವಳಿ ನಗರದ ಸುತ್ತ ಮುತ್ತಲೂ ಬೆಳೆದಿರುವ ಹೊಸ ಬಡಾವಣೆಗಳನ್ನು ಗಮನಕ್ಕೆ ತೆಗೆದುಕೊಂಡು ವಿವರವಾದ ಅಂದಾಜನ್ನು ತಯಾರಿಸಲು ಸರ್ವೆ ಕಾರ್ಯಕ್ಕೆ ಗುತ್ತಿಗೆ ಕರೆಯಲಾಗಿದ್ದು, ಗುತ್ತಿಗೆ ನಿಗದಿಪಡಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ ಶೀಘ್ರವೇ ಯೋಜನೆ ಅಂದಾಜನ್ನು ತಯಾರಿಸಲು ಕ್ರಮ ಜರುಗಿಸಲಾಗಿದೆ

ಚಿಂತಾಮಣಿ ನಗರಸಭಾ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಅಭಾವದ ಬಗ್ಗೆ

02 (113) ಶ್ರೀ ಚೌಡಾರೆಡ್ಡಿ (ಚಿಂತಾಮಣಿ) ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಂತಾಮಣಿ ನಗರಸಭೆಯ ವ್ಯಾಪ್ತಿಯಲ್ಲಿರುವ ಸಾರ್ವಜನಿಕರಿಗೆ ಕುಡಿಯುವ ನೀರಿಗಾಗಿ ಎಷ್ಟು ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಇದರಲ್ಲಿ ಎಷ್ಟು ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿದೆ

ಆ) ಅನೇಕ ಬಡ ಜನರಿರುವ ಕಾಲೋನಿಗಳಲ್ಲಿ ಕುಡಿಯುವ ನೀರಿಗೆ ಬಹಳ ತೊಂದರೆ ಆಗಿದ್ದು, ಮತ್ತು ಸರ್ಕಾರಿ ಬಾಲಕರ ಮತ್ತು ಬಾಲಕಿಯರ ಕಾಲೇಜುಗಳಲ್ಲಿ ನೀರಿನ ಕೊರತೆ ಜಾಸ್ತಿ ಇದ್ದು, ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ

ಇ) ನೀರಿನ ಅಭಾವ ನೀಗಿಸಲು ಸರ್ಕಾರ ಅತೀ ಜರೂರಾಗಿ ಕ್ರಮ ತೆಗೆದುಕೊಂಡು ಸಾರ್ವಜನಿಕರ ಮತ್ತು ವಿದ್ಯಾರ್ಥಿಗಳ ತೊಂದರೆ ನಿವಾರಿಸಲು ಕ್ರಮ ತೆಗೆದುಕೊಳ್ಳಲಾಗುತ್ತದೆಯೇ?

ಶ್ರೀ ಡಿ ಕೆ ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ) ಚಿಂತಾಮಣಿ ನಗರದಲ್ಲಿ ಒಟ್ಟು 98 ಕೊಳವೆ ಬಾವಿಗಳನ್ನು ಕೊರೆಯಲಾಗಿದೆ ಇದರಲ್ಲಿ 73 ಕೊಳವೆ ಬಾವಿಗಳಲ್ಲಿ ನೀರು ಸಿಗುತ್ತಿದೆ

ಆ) ಹೌದು

ಇ) ನೀರಿನ ಅಭಾವ ನೀಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ

ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅನಧಿಕೃತ ಪಂಪ್ ಸೆಟ್ಟುಗಳ ಬಗ್ಗೆ

03 (307) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಅನಧಿಕೃತ ಪಂಪ್ ಸೆಟ್‌ಗಳು ಕಾರ್ಯನಿರ್ವಹಿಸುತ್ತಿವೆ,

ಆ) ಕಳೆದ 1 ವರ್ಷದಿಂದ ಪಂಪ್‌ಸೆಟ್‌ಗಳ ಅಕ್ರಮ ಸಂಪರ್ಕವನ್ನು ಸಕ್ರಮಗೊಳಿಸಲು ಎಷ್ಟು ಅರ್ಜಿಗಳು ಬಂದಿವೆ ಇವುಗಳಲ್ಲಿ ಎಷ್ಟು ಅರ್ಜಿಗಳನ್ನು ಪುರಸ್ಕರಿಸಲಾಗಿದೆ ಮತ್ತು ತಿರಸ್ಕೃತಗೊಂಡ ಅರ್ಜಿಗಳು ಎಷ್ಟು